**Akashvani : Bangalore**
**Regional Bulletin In Kannada**
**01.01.2026 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**01.01.2026 / 14.30 hrs**

**<><*<><>*><>**

ಮುಖ್ಯಾಂಶಗಳು

**೧. ಮರ್ಯಾದ ಹತ್ಯೆ ತಡೆಗೆ ಮುಂದಿನ ಅಧಿವೇಶನದಲ್ಲಿ ಕಠಿಣ ಕಾನೂನು - ಸಚಿವ ಎಚ್.ಸಿ.ಮಹಾದೇವಪ್ಪ**

**೨. ಶೀಘ್ರವೇ ಬೆಂಗಳೂರು-ಮಂಗಳೂರು ನಡುವೆ ವಂದೇ ಭಾರತ್ ರೈಲು - ಕೇಂದ್ರ ಸಚಿವ ವಿ.ಸೋಮಣ್ಣ**

**೩. ಬೆಂಗಳೂರಿನಲ್ಲಿ ಮೇಲ್ಸೇತುವೆ ಲೋಕಾರ್ಪಣೆಗೊಳಿಸಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್**

**೪. ಪ್ರವಾಸೋದ್ಯಮ ಅಭಿವೃದ್ಧಿಪಡಿಸಲು ಮಂಗಳೂರಿನಲ್ಲಿ ಕರಾವಳಿ ಜನಪ್ರತಿನಿಧಿಗಳ ಸಭೆ**

**೫. ಹೊಸ ವರ್ಷಾಚರಣೆ ಹಿನ್ನೆಲೆ; ರಾಜ್ಯದ ವಿವಿಧ ದೇವಾಲಯಗಳಲ್ಲಿ ವಿಶೇಷ ಪೂಜೆ**

**<><*<><>*><>**

ಮರ್ಯಾದಾ ಹತ್ಯೆಯಂತಹ ಪ್ರಕರಣಗಳ ತಡೆಗೆ ಕಠಿಣ ಕಾನೂನನ್ನು ಮುಂದಿನ ಅಧಿವೇಶನದಲ್ಲಿ ಜಾರಿಗೆ ತರುವ ಕುರಿತು ಪರಿಶೀಲಿಸಲಾಗುವುದು ಎಂದು ಸಮಾಜ ಕಲ್ಯಾಣ ಇಲಾಖೆ ಸಚಿವ ಎಚ್.ಸಿ.ಮಹಾದೇವಪ್ಪ ತಿಳಿಸಿದ್ದಾರೆ.

ಹುಬ್ಬಳ್ಳಿ ತಾಲೂಕಿನ ಇನಾಂವೀರಾಪುರದಲ್ಲಿ ಮರ್ಯಾದಾ ಹತ್ಯೆ ಪ್ರಕರಣದ ಸಂತ್ರಸ್ತರಾದ ವಿವೇಕಾನಂದ ದೊಡ್ಡಮನಿ ಕುಟುಂಬದವರಿಗೆ ಅವರು ಸಾಂತ್ವನ ಹೇಳಿದರು. ಬಳಿಕ ಮಾತನಾಡಿದ ಅವರು, ಈ ಪ್ರಕರಣದಲ್ಲಿ ಭಾಗಿಯಾಗಿರುವವರು ಹಾಗೂ ಉತ್ತೇಜನ ನೀಡಿದವರನ್ನು ಶಿಕ್ಷಿಸಲಾಗುವುದು ಎಂದು ಹೇಳಿದ್ದಾರೆ.

ಸಮಾಜ ಕಲ್ಯಾಣ ಇಲಾಖೆಯ ವೈಫಲ್ಯದ ಆರೋಪ ಕುರಿತು ತನಿಖೆ ನಡೆಸಲಾಗುವುದು. ತನಿಖಾ ವರದಿ ಬಂದ ಬಳಿಕ ತಪ್ಪು ಎಸಗಿದ ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ ಜರುಗಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಕೊಲೆ ಆರೋಪಿಗಳ ವಿರುದ್ಧವೂ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

ಧ್ವನಿ: ಎಚ್.ಸಿ.ಮಹಾದೇವಪ್ಪ ( ೨೦ ಸೆಕೆಂಡ್ಸ್)

**<><*<><>*><>**

ಮರ್ಯಾದ ಹತ್ಯೆ ಕುರಿತಂತೆ ಕಾನೂನಿಗಿಂತ ಜನರಿಗೆ ಹೆಚ್ಚಿನ ಅರಿವು ಮೂಡಿಸುವ ಅಗತ್ಯವಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹುಬ್ಬಳ್ಳಿ ಮರ್ಯಾದ ಹತ್ಯೆ ಕುರಿತಂತೆ ಪ್ರತಿಕ್ರಿಯಿಸಿ, ಈ ಪ್ರಕರಣದ ತನಿಖೆ ಮತ್ತು ಕಾನೂನು ಕಾರ್ಯವಿಧಾನಗಳನ್ನು ಶೀಘ್ರವೇ ಪೂರ್ಣಗೊಳಿಸಲಾಗುವುದು ಎಂದು ಹೇಳಿದ್ದಾರೆ. ಇದೇ ವೇಳೆ, ಈ ವರ್ಷ ಬಡ್ತಿ ಪಡೆಯುವ ಭರವಸೆ ಹೊಂದಿರುವುದಾಗಿ ತಿಳಿಸಿದ್ದಾರೆ. ತಾನು ಆಶಾವಾದಿಯಾಗಿದ್ದು, ಹೈಕಮಾಂಡ್ ನಿರ್ಧರಿಸಿದರೆ, ೨೦೨೬ರಲ್ಲಿ ಬಡ್ತಿ ಸಿಗಬಹುದು ಎಂದು ಸ್ಪಷ್ಟಪಡಿಸಿದ್ದಾರೆ. ಪೊಲೀಸ್ ಇಲಾಖೆಯಲ್ಲಿ ಇದೇ ಮೊದಲ ಬಾರಿಗೆ ಐಜಿಪಿಗಳು ಮತ್ತು ಡಿಐಜಿಗಳಿಗೆ ದೊಡ್ಡ ಪ್ರಮಾಣದಲ್ಲಿ ಬಡ್ತಿ ನೀಡಲಾಗಿದೆ. ಅವರು ರಾಜ್ಯಕ್ಕೆ ಉತ್ತಮ ಸೇವೆ ಸಲ್ಲಿಸಲಿದ್ದಾರೆ ಎಂದು ಆಶವಾದ ವ್ಯಕ್ತಪಡಿಸಿದ್ದಾರೆ.

**<><*<><>*><>**

ದಕ್ಷಿಣ ಕನ್ನಡ ಜಿಲ್ಲೆಯ ಜನರಿಗೆ ಕೇಂದ್ರ ಸರ್ಕಾರ ಸಿಹಿ ಸುದ್ದಿ ನೀಡಿದೆ. ಬಹು ನಿರೀಕ್ಷಿತ ವಂದೇ ಭಾರತ್ ರೈಲು, ಬೆಂಗಳೂರು-ಮಂಗಳೂರು ನಡುವೆ ಶೀಘ್ರವೇ ಸಂಚರಿಸಲಿದೆ.  ಸಕಲೇಶಪುರ ಮತ್ತು ಸುಬ್ರಹ್ಮಣ್ಯ ರಸ್ತೆಯ ನಡುವಿನ ೫೫ ಕಿಲೋಮೀಟರ್ ಘಾಟ್ ವಿಭಾಗದಲ್ಲಿ ವಿದ್ಯುದೀಕರಣ ಪೂರ್ಣಗೊಂಡ ಬಳಿಕ ಯೋಜನೆಗೆ ಚಾಲನೆ ನೀಡಲಾಗುವುದು ಎಂದು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ಈ ಕುರಿತಂತೆ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್

ಮಾಡಿರುವ ಅವರು, ಬಹುದಿನಗಳ ಬೇಡಿಕೆಯಾಗಿರುವ ವಂದೇ ಭಾರತ್ ರೈಲು ಓಡಾಟ ಆರಂಭಿಸುವ ಸಮಯ ಹತ್ತಿರವಾಗಿದೆ ಎಂದು ತಿಳಿಸಿದ್ದಾರೆ.

**<><*<><>*><>**

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ-ಬಿಡಿಎ ಹೆಬ್ಬಾಳದಲ್ಲಿ ನಿರ್ಮಿಸಿರುವ ತುಮಕೂರು ಮತ್ತು ಬೆಂಗಳೂರು ಉತ್ತರ ಕಡೆಯಿಂದ ಮೇಖ್ರಿ ವೃತ್ತದ ಕಡೆ ಸುಗಮ ಸಂಚಾರಕ್ಕೆ ಅನುವಾಗುವ ಮೇಲ್ಸೇತುವೆಯನ್ನು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದು ಉದ್ಘಾಟಿಸಿದರು. ಸಚಿವ ಬೈರತಿ ಸುರೇಶ್, ಬಿಡಿಎ ಅಧ್ಯಕ್ಷ, ಶಾಸಕ ಎನ್ ಎ ಹ್ಯಾರಿಸ್, ಆಯುಕ್ತ ಮಣಿವಣ್ಣನ್, ಉಪಮುಖ್ಯಮಂತ್ರಿ ಕಾರ್ಯದರ್ಶಿ ರಾಜೇಂದ್ರ ಚೋಳನ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಇದಕ್ಕೂ ಮೊದಲು ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಈ ಮೇಲ್ಸೇತುವೆಯಿಂದ ಟ್ರಾಫಿಕ್ ಸಮಸ್ಯೆಗೆ ಪರಿಹಾರ ಸಿಗಲಿದೆ ಎಂದು ತಿಳಿಸಿದ್ದಾರೆ.

**<><*<><>*><>**

ರಾಜ್ಯದ ಕರಾವಳಿಯಲ್ಲಿ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಇದೇ ೧೦ ರಂದು ಮಂಗಳೂರಿನಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಧ್ಯಕ್ಷತೆಯಲ್ಲಿ ಸಭೆ ನಡೆಯಲಿದೆ. ಕಾರವಾರದಲ್ಲಿ ಮಾತನಾಡಿದ ರಾಜ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವ ಮಂಕಾಳ ವೈದ್ಯ ಸಭೆಯಲ್ಲಿ ಕರಾವಳಿಯ ಮೂರು ಜಿಲ್ಲೆಗಳ ಶಾಸಕರು, ಸಂಸದರು, ಜನಪ್ರತಿನಿಧಿಗಳು ಹಾಗೂ ಉದ್ಯಮಿಗಳು ಭಾಗವಹಿಸಿ ಪ್ರವಾಸೋದ್ಯಮ ಅಭಿವೃದ್ಧಿಗೆ ಚರ್ಚಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ರಾಜ್ಯದಲ್ಲಿ ೩೪೪ ಕಿಲೋಮೀಟರ್ ಕಡಲತೀರವಿದ್ದು, ಇಲ್ಲಿನ ಜನತೆ ಉದ್ಯೋಗ ಅರಸಿ, ಇತರೆ ಜಿಲ್ಲೆ, ರಾಜ್ಯಗಳಿಗೆ ತೆರಳದೇ ಪ್ರವಾಸೋದ್ಯಮ ಅಭಿವೃದ್ಧಿಯ ಮೂಲಕ ಇಲ್ಲಿಯೇ ಉದ್ಯೋಗ ಸೃಷ್ಟಿಸುವ ಉದ್ದೇಶದಿಂದ ಕರಾವಳಿಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿ ನೀತಿಯನ್ನು ರಚಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

**<><*<><>*><>**

೨೦೨೫ ಮುಗಿದು, ೨೦೨೬ ಬಂದೇಬಿಟ್ಟಿದೆ. ರಾಜ್ಯದ ಜನತೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಪ್ರತಿಪಕ್ಷ ನಾಯಕ

ಆರ.ಅಶೋಕ ಸೇರಿದಂತೆ ಹಲವು ಗಣ್ಯರು ಶುಭ ಕೋರಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಈ ವರ್ಷ ಉತ್ತಮ ಮಳೆ, ಬೆಳೆಯಾಗಿ ರಾಜ್ಯ ಸಮೃದ್ಧಿಯಾಗಲಿ ಎಂದು ಹಾರೈಸಿದಿದ್ದಾರೆ. ಮೊದಲ ದಿನವಾದ ಇಂದು ಹೊಸ ವರ್ಷದ ಹಿನ್ನೆಲೆಯಲ್ಲಿ ರಾಜ್ಯದ ವಿವಿಧ ದೇವಾಲಯಗಳಲ್ಲಿ ವಿಶೇಷ ಪೂಜೆ ಪುನಸ್ಕಾರಗಳು ನಡೆಯುತ್ತಿವೆ. ಮಂತ್ರಾಲಯ, ಮಲೆಮಹದೇಶ್ವರ ಬೆಟ್ಟ ಸೇರಿದಂತೆ ಹಲವು ದೇವಾಲಯಗಳಿಗೆ ಜನಸಾಗರವೇ ಹರಿದುಬುರುತ್ತಿದೆ. ೨೦೨೪ರ ಹೊಸ ವರ್ಷಾಚರಣೆಯನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸಡಗರ ಸಂಭ್ರಮದಿಂದ ಆಚರಿಸಲಾಗುತ್ತಿದೆ. ದೊಡ್ಡಬಳ್ಳಾಪುರದ ಸಂತ ಪೇತ್ರರ ಚರ್ಚ್‌ನ ಟೆರಿ ಪ್ರಕಾಶ್ ಅವರ ನೇತೃತ್ವದಲ್ಲಿ ವಿಶೇಷ ಪ್ರಾರ್ಥನೆ ನಡೆಯಿತು. ಕೋಲಾರ ಜಿಲ್ಲೆಯಲ್ಲಿ ಹೊಸ ವರ್ಷವನ್ನು ಸಂಭ್ರಮದಿಂದ  ಅಚರಿಸಲಾಗುತ್ತಿದೆ. ಬೆಳಿಗ್ಗೆಯಿಂದಲೇ ವಿವಿಧ ದೇವಾಲಯಗಳಲ್ಲಿ ವಿಶೇಷ ಪೂಜಾ ಕೈಂಕರ್ಯಗಳು ನಡೆಯುತ್ತಿದೆ.

<><*<><>*><>

ಬೆಂಗಳೂರು ವಿಶ್ವವಿದ್ಯಾಲಯದ ಭೂವಿಜ್ಞಾನ ವಿಭಾಗದ ಮುಖ್ಯಸ್ಥರಾಗಿದ್ದ ನಿವೃತ್ತ ಪ್ರಾಧ್ಯಪಕ ಡೋಯಿನ್ ಇಂದು ನಿಧನರಾಗಿದ್ದಾರೆ. ಅವರಿಗೆ ೯೭ ವರ್ಷ ವಯಸ್ಸಾಗಿತ್ತು. ಅವರು ಜಕೊಸ್ಲಾವಾಕಿಯಾದ ರಾಷ್ಟ್ರೀಯ ವಿಜ್ಞಾನ ಅಕಾಡೆಮಿಯ ಗೌರವ ಫೆಲೋಶಿಪ್‌ಗೆ ಭಾಜನರಾಗಿದ್ದರು. ೧೯೭೯ ರಲ್ಲಿ ಅಪೊಲೋ ೯ ರ ಚಂದ್ರನ ಬಸಾಲ್ಟ್ ಮಾದರಿಗಳನ್ನು ಅಧ್ಯಯನ ಮಾಡಲು ನಾಸಾ ಅವರನ್ನು ಆಯ್ಕೆ ಮಾಡಿತ್ತು. ಭಾರತದಲ್ಲಿ ಮೊದಲ ಬಾರಿಗೆ ಅವರು ಜಲಭೂವಿಜ್ಞಾನ ವಿಭಾಗದ ಶೈಕ್ಷಣಿಕ ಅಧ್ಯಯನವನ್ನು ಎಂ.ಟೆಕ್ ಪದವಿಯಾಗಿ ಪರಿಚಯಿಸಿದ್ದರು. ಅವರು ೨೦ ವರ್ಷಗಳ ಕಾಲ ಭಾರತೀಯ ಖನಿಜಶಾಸ್ತ್ರ ಸಂಘದ ಅಧ್ಯಕ್ಷರಾಗಿದ್ದರು ಮತ್ತು ೨೪ ವರ್ಷಗಳ ಕಾಲ ಬೆಂಗಳೂರು ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿದ್ದರು.

<><*<><>*><>

೪೪ನೇ ಕಿರಿಯರ ರಾಷ್ಟ್ರೀಯ ಜೂನಿಯರ್ ಖೋ ಖೋ ಪಂದ್ಯಾವಳಿ ಬೆಂಗಳೂರಿನ ಗುಂಜೂರಿನ ಅಟಲ್ ಬಿಹಾರಿ ವಾಜಪೇಯಿ ಕ್ರೀಡಾಂಗಣದಲ್ಲಿ ಆರಂಭಗೊಂಡಿದೆ.

ವಿವಿಧ ರಾಜ್ಯಗಳು, ಕೇಂದ್ರಾಡಳಿತ ಪ್ರದೇಶಗಳ ಕ್ರೀಡಾಪಟುಗಳು ಪಂದ್ಯಾವಳಿಯಲ್ಲಿ ಭಾಗಿಯಾಗಿದ್ದಾರೆ. ಲೀಗ್ ಕಮ್ ನಾಕೌಟ್ ಮಾದರಿಯಲ್ಲಿ ಪಂದ್ಯಾವಳಿ ನಡೆಯಲಿದ್ದು, ಇದೇ ೪ ರಂದು ಫೈನಲ್ ಪಂದ್ಯ ನಡೆಯಲಿದೆ.

**<><*<><>*><>**

ಕೋಲಾರ ಜಿಲ್ಲೆಯಲ್ಲಿ ಕಳೆದ ಒಂದೂವರೆ ವರ್ಷದಿಂದ ಅತ್ಯಂತ ಕ್ರಿಯಾಶೀಲ ಮತ್ತು ದಕ್ಷತೆಯಿಂದ ಕಾರ್ಯನಿರ್ವಹಿಸಿದ್ದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಿಖಿಲ್ ಬಿ ಅವರನ್ನು ಸರ್ಕಾರ ಶಿವಮೊಗ್ಗ ಎಸ್‌ಪಿಯಾಗಿ ವರ್ಗಾವಣೆ ಮಾಡಿದೆ. ಕೋಲಾರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯಾಗಿ ಕಲಬುರಗಿಯಲ್ಲಿ ಕಾನೂನು ಮತ್ತು ಸುವ್ಯವಸ್ಥೆಯ ಉಪ ಪೊಲೀಸ್ ಆಯುಕ್ತರಾಗಿ ಕಾರ್ಯನಿರ್ವಹಿಸುತ್ತಿದ್ದ ಕನ್ನಿಕಾ ಸುಕ್ರಿವಾಲ್ ನೇಮಕಗೊಂಡಿದ್ದಾರೆ.

**<><*<><>*><>**

ವಿಜಯಪುರ ಜಿಲ್ಲಾ ಕೇಂದ್ರ ಹಾಗೂ ಎಲ್ಲಾ ತಾಲೂಕು ಕೇಂದ್ರಗಳ ನ್ಯಾಯಾಲಯಗಳಲ್ಲಿ ಇದೇ ೨೪ರಂದು ವಿಶೇಷ ಲೋಕ್ ಅದಾಲತ್ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಹರೀಶ ಎ. ತಿಳಿಸಿದ್ದಾರೆ. ವಿಜಯಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದ ಮೇರೆಗೆ, ಎಲ್ಲಾ ಕಕ್ಷಿದಾರರ ಅನುಕೂಲಕ್ಕಾಗಿ ವಿಶೇಷ-ಲೋಕ್-ಅದಾಲತನ್ನು ಹಮ್ಮಿಕೊಳ್ಳಲಾಗಿದೆ. ಲೋಕ ಅದಾಲತ್‌ನಲ್ಲಿ ರಾಜೀ ಸಂಧಾನಕ್ಕೆ ಒಳಪಡಬಹುದಾದ ಭೂ-ಸ್ವಾಧೀನ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಅವಕಾಶವಿರುವುದರಿಂದ ಎಲ್ಲ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದು ತಿಳಿಸಿದ್ದಾರೆ.

**<><*<><>*><>**

ಹಾವೇರಿ ಜಿಲ್ಲೆಗೆ ಇದೇ ೭ ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆಗಮಿಸಿ ವಿವಿಧ ಕಾಮಗಾರಿಗಳ ಉದ್ಘಾಟನೆ ಹಾಗೂ ಶಿಲಾನ್ಯಾಸ ನೆರವೇರಿಸಲಿದ್ದಾರೆ ಎಂದು ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ್ ದಾನಮ್ಮನವರ ತಿಳಿಸಿದ್ದಾರೆ. ಹಾವೇರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿಂದು ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ರೀತಿಯಲ್ಲಿ ತಯಾರಿ ನಡೆಸುವಂತೆ ಸೂಚಿಸಿದ್ದಾರೆ.

ಹಾವೇರಿ ವೈದ್ಯಕೀಯ ಕಾಲೇಜಿನ ಉದ್ಘಾಟನೆ ವೇದಿಕೆಯಲ್ಲೇ ಅವರು, ಹಲವು ಅಭಿವೃದ್ಧಿ ಕಾಮಗಾರಿಗಳಿಗೆ ಶಿಲಾನ್ಯಾಸ ಹಾಗೂ ಚಾಲನೆ ನೀಡಲಿದ್ದಾರೆ.

**<><*<><>*><>**

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಇಂದು ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ನಡೆದ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ಕಾರ್ಯಕ್ರಮದಲ್ಲಿ ಶಾಸಕ ಧೀರಜ್ ಮುನಿರಾಜು ಮಾತನಾಡಿ, ಅಮರಶಿಲ್ಪಿ ಜಕಣಾಚಾರಿ ಅವರ ಜಗದ್ವಿಖ್ಯಾತ ಹಾಗೂ ವಿಶಿಷ್ಟ ಶಿಲ್ಪಕಲೆಗಳು ನಮ್ಮ ನಾಡಿಗೆ ಕಳಶಪ್ರಾಯವಾಗಿವೆ ಎಂದು ಅಭಿಪ್ರಾಯಪಟ್ಟಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**